**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ಸಿ.ಸಿ. ಸಂಃ 3788/2022**

| | | |
|---|---|---|
| ಸಾಕ್ಷಿಯ ಹೆಸರುಃ | ಲಕ್ಷ್ಮಮ್ಮ | ಫ್ರಾಸಾಃಃ 3 |
| ಗಂಡನ ಹೆಸರುಃ | ಹನುಮಂತರೆಡ್ಡಿ | ಚಾಸಾಃಃ 3 |
| ವಯಸ್ಸುಃ | 76 ವರ್ಷ | ಪ್ರಮಾಣೀಕರಿಸಿದ<br>ದಿಃ 08/07/2025 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಸುರಗಳ್ಳಿ ಗ್ರಾಮ,<br>ಪಿರಿಯಾಪಟ್ಟಣ ತಾ. | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ**

ನನಗೆ ಆರೋಪಿತ ಗೊತ್ತು. ನನಗೆ ಚಾಸಾ-1 ಗೊತ್ತಿಲ್ಲ. ಆರೋಪಿತ ವ್ಯವಸಾಯ ಮಾಡುತ್ತಾರೆ. ನನಗೆ ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ. ನಾನು ಪೊಲೀಸರಿಗೆ ಹೇಳಿಕೆ ನೀಡಿಲ್ಲ.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಕಡತವನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸಸಅ ರವರಿಂದಃ**

ಆರೋಪಿತ ಕಲ್ಲು ಗಣಿಗಾರಿಕೆ ನಡೆಸುತ್ತಿದ್ದರು ಎಂದರೆ ಸರಿ. ಆರೋಪಿತ ಚಾಸಾ-1 ರವರ ಹಿಟಾಚಿ ವಾಹನವನ್ನು ನಮ್ಮ ಮನೆಯ ಬಳಿ ನಿಲ್ಲಿಸಿದ್ದರು ಎಂದರೆ ಸರಿಯಲ್ಲ. ಚಾಸಾ-1 ರವರಿಗೆ ಮೈ ಹುಷಾರಿಲ್ಲದ ಕಾರಣ ಬೆಂಗಳೂರಿಗೆ ಹೋದಾಗ ಆರೋಪಿತ ಸದರಿ ಹಿಟಾಚಿ ವಾಹನವನ್ನು ಮಾರಾಟ ಮಾಡುವ ಸಲುವಾಗಿ 3-4 ಗುಜರಿ

ವ್ಯಾಪಾರಸ್ಥರಿಗೆ ತೋರಿಸಿದರು ಎಂದರೆ ನನಗೆ ಗೊತ್ತಿಲ್ಲ. ಸದರಿ ಹಿಟಾಚಿ ವಾಹನವನ್ನು ರೂ.2,40,000/-ಕ್ಕೆ ಮಾರಾಟ ಮಾಡಿ, ರೂ.1,65,000/-ನ್ನು ಸೋಮಣ್ಣ ಎಂಬುವವರಿಗೆ ನೀಡಿದ್ದರು ಎಂದರೆ ನನಗೆ ಗೊತ್ತಿಲ್ಲ. ಸೋಮಣ್ಣನವರಿಗೆ ರೂ.75,000/-ಕ್ಕೆ ಚೆಕ್ಕನ್ನು ನೀಡಿದ್ದರು ಎಂದರೆ ನನಗೆ ಗೊತ್ತಿಲ್ಲ. ರೂ.75,000/- ಚೆಕ್ಕನ್ನು ನೀಡುವಾಗ ಹಿಟಾಚಿ ವಾಹನವನ್ನು ತೆಗೆದುಕೊಂಡು ಹೋಗುತ್ತೇನೆಂದು ತಿಳಿಸಿದರು ಎಂದರೆ ನನಗೆ ಗೊತ್ತಿಲ್ಲ.

ದಿಃ13/09/2019 ರಂದು ಮಧ್ಯಾಹ್ನ 1.30 ರಿಂದ 3.30 ಗಂಟೆ ಸಮಯದಲ್ಲಿ ಗುಜರಿ ವ್ಯಾಪಾರಿಗಳು ಹಿಟಾಚಿ ವಾಹನವನ್ನು ತೆಗೆದುಕೊಂಡು ಹೋದರು ಎಂದರೆ ನನಗೆ ಗೊತ್ತಿಲ್ಲ. ಅದ್ದರಿಂದ ಆರೋಪಿತ ಚಾಸಾ-1 ರವರಿಗೆ ಸೇರಿದ ಹಿಟಾಚಿ ವಾಹನವನ್ನು ತನಗೆ ಸೇರಿದ್ದು ಎಂದು ಮಾರಾಟ ಮಾಡಿ ಮೋಸ ಮಾಡಿದರು ಎಂದರೆ ನನಗೆ ಗೊತ್ತಿಲ್ಲ. ಈ ವಿಚಾರವನ್ನು ಪೊಲೀಸರಿಗೆ ತಿಳಿಸಿ, ಹೇಳಿಕೆಯನ್ನು ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು **ನಿಪಿ.5** ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರಿಂದಃ** ಇಲ್ಲ.

**ಮರು ವಿಚಾರಣೆಃ** ಇಲ್ಲ.

**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**

**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**ಹೆಚಿ.ನ್ಯಾ ಹಾಗೂ ಪ್ರ.ದ.ನ್ಯಾದಂ.,**

**ಪಿರಿಯಾಪಟ್ಟಣ.**